# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 605 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ, ದರ ಮತ್ತು ಶುಲ್ಕಗಳನ್ನು ಕ್ರಮಬದ್ಧವಾಗಿ ವಸೂಲಿ ಮಾಡಲು ನಿಯಮಗಳನ್ನು ರಚಿಸಲಾಗಿದೆಯೇ; ನಿಯಮಗಳನ್ನು ರಚಿಸಿದ್ದಲ್ಲಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ವಾಣಿಜ್ಯ ಚಟುವಟಿಕೆಗಳಿಗೆ ವಿಧಿಸಲಾಗುತ್ತಿರುವ ಲೈಸೆನ್ಸ್ ಶುಲ್ಕ ಎಷ್ಟು: (ವಿವರ ನೀಡುವುದು) | ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ, ದರ ಮತ್ತು ಫೀಜುಗಳನ್ನು ವಿಧಿಸಿ, ವಸೂಲಿ ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ತೆರಿಗೆ, ದರ ಮತ್ತು ಫೀಜುಗಳು) ನಿಯಮಗಳು, 2021 ಅನ್ನು ರಚಿಸಲಾಗಿದೆ.<br><br>ಈ ನಿಯಮಗಳ ಉಪನಿಯಮ 24(ಇ) ರಲ್ಲಿ ವಾಣಿಜ್ಯ, ವಸತಿಯೇತರ ವ್ಯವಹಾರ ಲೈಸೆನ್ಸ್ ಶುಲ್ಕವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 67, 68, 69 ಮತ್ತು 70 ರಡಿಯಲ್ಲಿ ಗ್ರಾಮ ಪಂಚಾಯತಿಯ ವ್ಯಾಪ್ತಿಯೊಳಗೆ ವ್ಯಾಪಾರಕ್ಕಾಗಿ ಅಥವಾ ವ್ಯವಹಾರಕ್ಕಾಗಿ ಪ್ರಾರಂಭಿಸಲಾಗುವ ಎಲ್ಲಾ ವಿಧದ ವಾಣಿಜ್ಯ, ವಸತಿಯೇತರ ಚಟುವಟಿಕೆಗಳಿಗೆ ನೀಡಲಾಗುವ ಮತ್ತು ನವೀಕರಿಸಲಾಗುವ ಲೈಸೆನ್ಸ್ ಶುಲ್ಕಗಳು ನಿಗಧಿಪಡಿಸಿದಂತೆ 'ಇರತಕ್ಕದ್ದು' ಎಂದಿರುತ್ತದೆ. |
| (ಆ) | ಗ್ರಾಮ ಪಂಚಾಯಿತಿಗಳಲ್ಲಿ ಸಂತೆ ಹರಾಜು, ವಾಣಿಜ್ಯ ಮಳಿಗೆ ಬಾಡಿಗೆ/ಗುತ್ತಿಗೆ, ಅನುಪಯುಕ್ತ ಸಾಮಗ್ರಿಗಳ ಹರಾಜುಗಳನ್ನು ಯಾವ ನಿಯಮಗಳಿಗನುಸಾರವಾಗಿ ಕಾರ್ಯಗತಗೊಳಿಸಲಾಗುತ್ತಿದೆ: | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) ನಿಯಮಗಳು, 1996 ಮತ್ತು ಸರ್ಕಾರದ ಆದೇಶ ಸಂಖ್ಯೆ:RDPR 247 GPA 2022, ದಿನಾಂಕ:23.11.2022ರಲ್ಲಿನ ರಾಜ್ಯದ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳು ಸ್ವತ್ತುಗಳನ್ನು ಗುತ್ತಿಗೆ, ಮಾರಾಟ ಅಥವಾ ಇತರೆ ವರ್ಗಾವಣೆ ಮಾಡುವ ಮಾರ್ಗಸೂಚಿಗಳನ್ವಯ ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು, 2000 ರನ್ವಯ ಕಾರ್ಯಗತಗೊಳಿಸಲಾಗುತ್ತಿದೆ. |

| | | |
|---|---|---|
| (ಇ) | ಪ್ರಸ್ತುತ ಇರುವ ನಿಯಮಗಳನ್ನು ಪುನರ್ ರಚಿಸಲು ಅಥವಾ ತಿದ್ದುಪಡಿ ಮಾಡಲು ಸರ್ಕಾರವು ಕ್ರಮಕೈಗೊಂಡಿದೆಯೇ; ಹಾಗಿದ್ದಲ್ಲಿ, ಯಾವ ಯಾವ ನಿಯಮಗಳನ್ನು ತಿದ್ದುಪಡಿ ಮಾಡಲಾಗುವುದು: (ವಿವರ ನೀಡುವುದು) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ತೆರಿಗೆ, ದರ ಮತ್ತು ಫೀಜುಗಳು) ನಿಯಮಗಳು, 2021 ರಲ್ಲಿನ ನಿಯಮಗಳಲ್ಲಿ ಆಡಳಿತಾತ್ಮಕವಾಗಿ ಅವಶ್ಯವಿರುವ ಕಡೆ ತಿದ್ದುಪಡಿ ಮಾಡಲು ಪರಿಶೀಲಿಸಲಾಗುತ್ತಿದೆ. |
| (ಈ) | ಇಲಾಖೆಯು ಅಧಿನಿಯಮ, ನಿಯಮಗಳನ್ನು ಪಾಲಿಸದೇ ಸ್ವವಿವೇಚನೆಯಂತೆ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಅವರ ವಿರುದ್ಧ ಕೈಗೊಂಡ ಕ್ರಮಗಳೇನು? | ಬಂದಿಲ್ಲ. |

ಸಂಖ್ಯೆ: ಗ್ರಾಅಪ 668 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.